7. ಮರಣ ಸಂಭವಿಸಿರುವ ಬಗ್ಗೆ ಹಾಗೂ ತುರ್ತು ನಿಯಂತ್ರಣ ಕ್ರಮಗಳನ್ನು ತೆಗೆದುಕೊಳ್ಳುವ ಬಗ್ಗೆ ಮಂಡ್ಯ ಮುನಿಸಿಪಲ್ ಕಮೀಷನರ್‌ರವರಿಗೆ ಕೋರಿದ್ದು, ಜಿಲ್ಲಾ ಮಲೇರಿಯ ಕಛೇರಿಯಿಂದ ಒಬ್ಬ ಆರೋಗ್ಯ ಮೇಲ್ವಿಚಾರಕರನ್ನು ಉಸ್ತುವಾರಿಗಾಗಿ ನಿಯೋಜಿಸಲಾಗಿದೆ.

8. ಆರೋಗ್ಯ ಶಿಕ್ಷಣಕ್ಕಾಗಿ ಭಿತ್ತಿ ಪತ್ರಗಳನ್ನು ಕಿರುಹೊತ್ತಿಗೆಗಳನ್ನು ಮುದ್ರಿಸಿ ಹಂಚಲಾಗುತ್ತಿದೆ ಹಾಗೂ ಈ ರೋಗದ ನಿಯಂತ್ರಣದಲ್ಲಿ ಜನತೆಯ ಪಾತ್ರದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.

ಬೆಳಗಾವಿ ಜಿಲ್ಲೆಯಲ್ಲಿ ಪ್ರೌಢ ಶಾಲೆಗಳ ಮಂಜೂರಾತಿ ಕುರಿತು

4047 (4580) : ಶ್ರೀ ಭರಮಗೌಡ ಆ ಕಾಗೆ (ಕಾಗವಾಡ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡಲಾಗಿದೆ;

ಆ) ಕಾಗವಾಡ ಮತ ಕ್ಷೇತ್ರದಿಂದ ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರಾತಿ ಮಾಡಲು ಬಂದಿದ್ದ ಪ್ರಸ್ತಾವನೆ ಎಷ್ಟು; ಇದರಲ್ಲಿ ಎಷ್ಟು ಮಂಜೂರು ಮಾಡಲಾಗಿದೆ;

ಇ) ಕಾಗವಾಡ ಮತ ಕ್ಷೇತ್ರಕ್ಕೆ ಸರ್ಕಾರಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡದಿರಲು ಕಾರಣವೇನು?

ಪ್ರೊ: ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು):

ಅ) ಒಂದು ಶಾಲೆಯನ್ನು ಮಂಜೂರು ಮಾಡಿದೆ.

ಆ) ಪ್ರಸ್ತಾವನೆ ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಧಾರವಾಡದಲ್ಲಿ ಸಾಂಸ್ಕೃತಿಕ ಭವನ ಕಟ್ಟಡಕ್ಕೆ ಹಣ ಮಂಜೂರಾತಿ

4051 (4585) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡವು ಕಲಾವಿದರ, ಸಾಹಿತಿಗಳ ಸಂಗೀತಕಾರರ, ಸಾಂಸ್ಕೃತಿಕ ನಗರವಾಗಿರುವುದು ಸರ್ಕಾರ ಗಮನಿಸಿದೆಯೇ?

ಆ) ನಗರದಲ್ಲಿ ಇಲಾಖೆ ವತಿಯಿಂದ ನಿವೇಶನದಲ್ಲಿ ಮುಖ್ಯಮಂತ್ರಿಗಳು ಘೋಷಣೆ ಮಾಡಿರುವ ಸಾಂಸ್ಕೃತಿಕ ಭವನದ ಕಟ್ಟಡಕ್ಕೆ ಹಣ ಬಿಡುಗಡೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ?

ಇ) ಈ ಕಟ್ಟಡವನ್ನು ಎಂದಿನಿಂದ ಪ್ರಾರಂಭಿಸಲಾಗುವುದು. ಸರ್ಕಾರ ಈ ಕಟ್ಟಡಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಿದೆ.

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಸಚಿವರು):

ಅ) ಹೌದು

ಆ) ಹೌದು